**All India Radio: Bangalore**
**National Bulletins In Kannada**
**12.06.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**12.06.2025 / 19.35 hrs**
**<><*<><>*><>**
**ಮುಖ್ಯಾಂಶಗಳು**
**<><*<><>*><>**

**೧. ಅಹಮದಾಬಾದ್‌ನಿಂದ ಲಂಡನ್‌ಗೆ ಹೊರಟಿದ್ದ ಏರ್ ಇಂಡಿಯಾ ವಿಮಾನ ಅಪಘಾತ - ವಿಮಾನದಲ್ಲಿದ್ದ ಎಲ್ಲಾ ಪ್ರಯಾಣಿಕರು ಸಾವನ್ನಪ್ಪಿರುವ ಶಂಕೆ**

**೨. ಗುಜರಾತ್‌ನ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಸೇರಿದಂತೆ ೧೬೯ ಭಾರತೀಯರು ೫೩ ಬ್ರಿಟಿಷ್ ಪ್ರಜೆಗಳು ಸಾವನ್ನಪ್ಪಿರುವ ಶಂಕೆ ಅಧಿಕೃತ ಮಾಹಿತಿ ನಿರೀಕ್ಷೆ**

**೩. ದುರಂತ ನಡೆದ ಸ್ಥಳಕ್ಕೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು ಭೇಟಿ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನೆ**

**೪. ಜಮ್ಮು ಮತ್ತು ಕಾಶ್ಮೀರದ ಆರು ಜಿಲ್ಲೆಗಳಲ್ಲಿ ಹೆಚ್ಚಿದ ಬಿಸಿಲಿನ ತಾಪ**

**<><*<><>*><>**

ಲಂಡನ್‌ಗೆ ಹೊರಟಿದ್ದ ಏರ್ ಇಂಡಿಯಾ ಪ್ರಯಾಣಿಕ ವಿಮಾನ ಇಂದು ಗುಜರಾತ್‌ನ ಅಹಮದಾಬಾದ್ ವಿಮಾನ ನಿಲ್ದಾಣದ ಬಳಿ ಮೇಘನಿ ನಗರ ಪ್ರದೇಶದಲ್ಲಿ ಅಪಘಾತಕ್ಕೀಡಾಗಿದೆ. ಮಧ್ಯಾಹ್ನ ೧ ಗಂಟೆ ೩೮ ನಿಮಿಷಕ್ಕೆ ವಿಮಾನ ಟೇಕ್ ಆಫ್ ಆಗಿ ಒಂದು ನಿಮಿಷದಲ್ಲಿ ತಾಂತ್ರಿಕ ದೋಷದಿಂದಾಗಿ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡು ಬಿಜೆ ಮೆಡಿಕಲ್ ಕಾಲೇಜಿನ ಹಾಸ್ಟಲ್‌ನ ಮೇಲೆ ಅಪ್ಪಳಿಸಿ ಸಂಪೂರ್ಣ ಉರಿಯಿತು. ನಾಗರಿಕ ವಿಮಾನಯಾನ ನಿರ್ದೇಶನಾಲಯ ಪ್ರಕಾರ, ವಿಮಾನದಲ್ಲಿ ೨ ಪೈಲಟ್‌ಗಳು ಮತ್ತು ೧೦ ಕ್ಯಾಬಿನ್ ಸಿಬ್ಬಂದಿ ಸೇರಿದಂತೆ ೨೪೨ ಜನರಿದ್ದರು. ವಿಮಾನದಲ್ಲಿ ಪ್ರಯಾಣಿಸುತ್ತಿದ್ದವರಲ್ಲಿ ಗುಜರಾತ್‌ನ ಮಾಜಿ ಮುಖ್ಯಮಂತ್ರಿ ವಿಜಯ್ ರೂಪಾನಿ ಸೇರಿದಂತೆ ೧೬೯ ಭಾರತೀಯರು, ೫೩ ಬ್ರಿಟಿಷ್ ಪ್ರಜೆಗಳು ೭ ಮಂದಿ ಪೋರ್ಚುಗೀಸ್ ಪ್ರಜೆಗಳು ಹಾಗೂ ಓರ್ವ ಕೆನಡಾ ಪ್ರಜೆ ಸೇರಿದ್ದಾರೆ. ವಿಮಾನ ಸಂಖ್ಯೆ - ◌ಐ೧೭೧ ಅಹಮದಾಬಾದ್‌ನಿಂದ ಲಂಡನ್‌ಗೆ ಹಾರಾಟ ನಡೆಸುತ್ತಿತ್ತು. ಎಚ್ಚರಿಕೆ ಬಂದ ತಕ್ಷಣ ಅಗ್ನಿಶಾಮಕ ಮತ್ತು ಪೊಲೀಸ್ ತಂಡಗಳನ್ನು ಸ್ಥಳಕ್ಕೆ ಕಳುಹಿಸಲಾಗಿದ್ದು, ೯೦ ಸಿಬ್ಬಂದಿಯನ್ನು ಒಳಗೊಂಡ ಮೂರು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್‌ಡಿಆರ್‌ಎಫ್) ತಂಡಗಳನ್ನು ಗಾಂಧಿನಗರದಿಂದ ವಿಮಾನ ಅಪಘಾತದ ಸ್ಥಳಕ್ಕೆ ಕರೆಸಿಕೊಳ್ಳಲಾಗಿದೆ. ಇನ್ನೂ ಮೂರು ಎನ್‌ಡಿಆರ್‌ಎಫ್ ತಂಡಗಳನ್ನು ವಡೋದರಾದಿಂದ ಸ್ಥಳಾಂತರಿಸಲಾಗುತ್ತಿದೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಅಹಮದಾಬಾದ್ ಸಿವಿಲ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಅಪಘಾತದ ಕಾರಣವನ್ನು ಕಂಡುಹಿಡಿಯಲು ಪ್ರಸ್ತುತ ಹೆಚ್ಚಿನ ತನಿಖೆ ನಡೆಯುತ್ತಿದೆ. ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆಗೆ ಅನುಕೂಲವಾಗುವಂತೆ ಅಪಘಾತ ಸ್ಥಳಕ್ಕೆ ಹೋಗುವ ಎಲ್ಲಾ ರಸ್ತೆಗಳನ್ನು ಮುಚ್ಚಲಾಗಿದೆ ಎಂದು ನಮ್ಮ ವರದಿಗಾರರು ತಿಳಿಸಿದ್ದಾರೆ. ಘಟನೆಯ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗುಜರಾತ್ ಮುಖ್ಯಮಂತ್ರಿ ಮತ್ತು ರಾಜ್ಯ ಗೃಹ ಸಚಿವರೊಂದಿಗೆ ಮಾತನಾಡಿದ್ದು, ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಅವರು, ಸಚಿವಾಲಯವು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದೆ ಎಂದು ಹೇಳಿದರು. ಎಲ್ಲಾ ವಿಮಾನಯಾನ ಮತ್ತು ತುರ್ತು ಪ್ರತಿಕ್ರಿಯೆ ಸಂಸ್ಥೆಗಳಿಗೆ ತ್ವರಿತ ಮತ್ತು ಸಂಘಟಿತ ಕ್ರಮ ಕೈಗೊಳ್ಳುವಂತೆ ಅವರು ನಿರ್ದೇಶನ ನೀಡಿದ್ದಾರೆ. ರಕ್ಷಣಾ ತಂಡಗಳನ್ನು ಸಜ್ಜುಗೊಳಿಸಲಾಗಿದೆ ಮತ್ತು ವೈದ್ಯಕೀಯ ನೆರವು ಮತ್ತು ಪರಿಹಾರ ಬೆಂಬಲವನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಅಹಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ಅಪಘಾತದ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರು ಗೃಹ ಸಚಿವ ಅಮಿತ್ ಶಾ ಮತ್ತು ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು ಅವರೊಂದಿಗೆ ಮಾತನಾಡಿದರು. ಏರ್ ಇಂಡಿಯಾ ವಿಮಾನ ಅಪಘಾತದ ಘಟನೆಯ ನಂತರ, ಭಾರತೀಯ ರೈಲ್ವೆ ಅಹಮದಾಬಾದ್‌ನಿಂದ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಎರಡು ವಿಶೇಷ ರೈಲುಗಳನ್ನು ಓಡಿಸಲಿದೆ. ಒಂದು ರೈಲು ಅಹಮದಾಬಾದ್‌ನಿಂದ ಮುಂಬೈಗೆ ಮತ್ತು ಇನ್ನೊಂದು ರೈಲು ಅಹಮದಾಬಾದ್‌ನಿಂದ ನವದೆಹಲಿಗೆ ಚಲಿಸಲಿದೆ. ಅಹಮದಾಬಾದ್‌ನಲ್ಲಿ ಏರ್ ಇಂಡಿಯಾ ವಿಮಾನ ಅಪಘಾತದ ನಂತರ ನಡೆಯುತ್ತಿರುವ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ಪ್ರಯತ್ನಗಳಲ್ಲಿ ನಾಗರಿಕ ಆಡಳಿತಕ್ಕೆ ಸಹಾಯ ಮಾಡಲು ಭಾರತೀಯ ಸೇನೆಯು ಸುಮಾರು ೧೩೦ ಸಿಬ್ಬಂದಿಯನ್ನು ಒಳಗೊಂಡ ತಂಡಗಳನ್ನು ನಿಯೋಜಿಸಿದೆ. ಮಿಲಿಟರಿ ಆಸ್ಪತ್ರೆಯನ್ನು ಸಹ ಸನ್ನದ್ಧವಾಗಿ ಇರಿಸಲಾಗಿದೆ. ವಿಮಾನದಲ್ಲಿ ಸಂಚರಿಸುತ್ತಿದ್ದ ಎಲ್ಲಾ ೨೪೨ ಜನ ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದೆ. ಕೆಲವು ಮಾಧ್ಯಮಗಳಲ್ಲಿ ಒಬ್ಬ ವ್ಯಕ್ತಿ ಜೀವಂತವಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವುದಾಗಿ ವರದಿಯಾಗಿದೆ. ಅಧಿಕೃತ ಮೃತರ ಸಂಖ್ಯೆ ಇನ್ನಷ್ಟೇ ಘೋಷಣೆಯಾಗಬೇಕಾಗಿದೆ.

<><*<><>*><>

ಏರ್ ಇಂಡಿಯಾ ವಿಮಾನ ಅಪಘಾತ ಘಟನೆಯನ್ನು ಗಮನದಲ್ಲಿಟ್ಟುಕೊಂಡು ಗುಜರಾತ್ ಸರ್ಕಾರವು ಅಹಮದಾಬಾದ್‌ನ ಬಿ.ಜೆ. ವೈದ್ಯಕೀಯ ಕಾಲೇಜಿನಲ್ಲಿ ಡಿಎನ್‌ಎ ಪರೀಕ್ಷಾ ವ್ಯವಸ್ಥೆಗಳನ್ನು ಮಾಡಿದೆ.

ವಿಮಾನ ಪ್ರಯಾಣಿಕರ ಗುರುತು ಪತ್ತೆಹಚ್ಚಲು ಅವರ ಕುಟುಂಬಗಳು ವಿಶೇಷವಾಗಿ ಅವರ ಪೋಷಕರು ಮತ್ತು ಮಕ್ಕಳು, ತಮ್ಮ ಮಾದರಿಗಳನ್ನು ಸಲ್ಲಿಸುವಂತೆ ಕೇಳಿಕೊಳ್ಳಲಾಗಿದೆ.

ಗುಜರಾತ್ ಆರೋಗ್ಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಧನಂಜಯ್ ದ್ವಿವೇದಿ ಮಾಧ್ಯಮಗಳೊಂದಿಗೆ ಮಾತನಾಡುತ್ತಾ ಇದನ್ನು ತಿಳಿಸಿದ್ದಾರೆ. ಸುಮಾರು ೫೦ ಗಾಯಾಳುಗಳನ್ನು ಅಹಮದಾಬಾದ್‌ನ ಸಿವಿಲ್ ಆಸ್ಪತ್ರೆಗೆ ಕರೆತರಲಾಗಿದೆ ಮತ್ತು ಅವರಿಗೆ ಉತ್ತಮ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಪ್ರಯಾಣಿಕರು ಮತ್ತು ಇತರ ಗಾಯಾಳುಗಳ ಸಂಬಂಧಿಕರಿಗಾಗಿ ಸಿವಿಲ್ ಆಸ್ಪತ್ರೆ ಸಹಾಯವಾಣಿ ಸಂಖ್ಯೆಗಳನ್ನು - ೬೩೫೭೩೭೩೮೩೧ ಮತ್ತು ೬೩೫೭೩೭೩೮೪೧ ಅನ್ನು ಬಿಡುಗಡೆ ಮಾಡಿದೆ ದ್ವಿವೇದಿ ಹೇಳಿದರು.

ವಿಮಾನ ಅಪಘಾತಕ್ಕೀಡಾದ ಪ್ರದೇಶದಲ್ಲಿ ಅಹಮದಾಬಾದ್ ಸಿವಿಲ್ ಆಸ್ಪತ್ರೆಯ ವಿದ್ಯಾರ್ಥಿಗಳ ಹಾಸ್ಟೆಲ್, ಸಿಬ್ಬಂದಿ ಕ್ವಾರ್ಟರ್ಸ್ ಮತ್ತು ಇತರ ವಸತಿ ಪ್ರದೇಶಗಳಿವೆ ಎಂದು ದ್ವಿವೇದಿ ತಿಳಿಸಿದ್ದಾರೆ.

<><*<><>*><>

ದುರಂತ ನಡೆದ ಸ್ಥಳಕ್ಕೆ ಭೇಟಿ ನೀಡಿದ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್‌ಮೋಹನ್ ನಾಯ್ಡು, ಅವರು ಸಾವಿನ ಕುರಿತು ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ನಂತರ ಅಧಿಕೃತ ಸಾವಿನ ಸಂಖ್ಯೆಯನ್ನು ದೃಢಪಡಿಸುವುದಾಗಿ ತಿಳಿಸಿದ್ದಾರೆ. ಘಟನೆಯ ಕುರಿತು ಸಮಗ್ರ ತನಿಖೆ ನಡೆಸಲಾಗುವುದು ಎಂದು ಅವರು ಹೇಳಿದರು. ಕೇಂದ್ರ ಗೃಹ ಸಚಿವರು ದುರಂತ ಸ್ಥಳಕ್ಕೆ ಸದ್ಯದಲ್ಲೇ ತಲುಪಲಿದ್ದಾರೆ ಎಂದು ಅವರು ತಿಳಿಸಿದರು.

ಧ್ವನಿ - ಕೇಂದ್ರ ರಾಮ್ ಮೋಹನ್ ನಾಯ್ಡು

<><*<><>*><>

ಅಹಮದಾಬಾದ್‌ನಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಕುರಿತಂತೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಇದನ್ನು ಹೃದಯ ವಿದ್ರಾವಕ ವಿಪತ್ತು ಎಂದು ಕರೆದಿದ್ದಾರೆ. ಸಂತ್ರಸ್ತ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ ಮತ್ತು ಶಕ್ತಿ ಮತ್ತು ಚೇತರಿಕೆಗಾಗಿ ಪ್ರಾರ್ಥಿಸುವುದಾಗಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ದುಃಖದ ಕ್ಷಣದಲ್ಲಿ, ರಾಷ್ಟ್ರವು ಸಂತ್ರಸ್ತ ಜನರೊಂದಿಗೆ ಒಗ್ಗಟ್ಟಿನಿಂದ ನಿಂತಿದೆ ಎಂದು ಹೇಳಿದ್ದಾರೆ. ಏರ್ ಇಂಡಿಯಾ ವಿಮಾನ ಅಪಘಾತವನ್ನು ಪದಗಳಲ್ಲಿ ಹೇಳಲು ಸಾಧ್ಯವಿಲ್ಲದಷ್ಟು ಹೃದಯವಿದ್ರಾವಕ ಎಂದು ಹೇಳಿರುವ ಪ್ರಧಾನಿ ನರೇಂದ್ರ ಮೋದಿ, ಸಂತ್ರಸ್ತರಿಗೆ ಸಹಾಯ ಮಾಡಲು ಶ್ರಮಿಸುತ್ತಿರುವ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಈ ದುಃಖದ ಸಮಯದಲ್ಲಿ ಇದರಿಂದ ಬಾಧಿತರಾದವರೊಂದಿಗೆ

ಸರ್ಕಾರ ಇದೆ ಎಂದು ಅವರು ಹೇಳಿದ್ದಾರೆ.  ಅಹಮದಾಬಾದ್ ಏರ್ ಇಂಡಿಯಾ ಅಪಘಾತ ಘಟನೆ ಹೃದಯವಿದ್ರಾವಕ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಅಹಮದಾಬಾದ್‌ನಲ್ಲಿ ನಡೆದ ಏರ್ ಇಂಡಿಯಾ ವಿಮಾನ ಅಪಘಾತದ ಬಗ್ಗೆ ಬ್ರಿಟನ್ ಪ್ರಧಾನಿ ಕೀರ್ ಸ್ಟಾರ್ಮರ್ ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅನೇಕ ಬ್ರಿಟಿಷ್ ಪ್ರಜೆಗಳನ್ನು ಹೊತ್ತೊಯ್ಯುತ್ತಿದ್ದ ವಿಮಾನ ಅಪಘಾತವು ವಿನಾಶಕಾರಿಯಾಗಿದೆ ಎಂದು ಅವರು ಹೇಳಿದ್ದಾರೆ. ಈ ತೀವ್ರ ದುಃಖದ ಸಮಯದಲ್ಲಿ ಪ್ರಯಾಣಿಕರು ಮತ್ತು ಅವರ ಕುಟುಂಬಗಳೊಂದಿಗೆ ತಮ್ಮ ಭಾವನೆಗಳು ಇರುವುದಾಗಿ ಅವರು ಹೇಳಿದರು. ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ವಿಪತ್ತು ನಿರ್ವಹಣಾ ಪಡೆಗಳನ್ನು ಅಪಘಾತದ ಸ್ಥಳಕ್ಕೆ ತ್ವರಿತವಾಗಿ ರವಾನಿಸಲಾಗಿದೆ ಪರಿಸ್ಥಿತಿಯನ್ನು ನಿರ್ಣಯಿಸಲು ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ರಾಜ್ಯ ಗೃಹ ಸಚಿವ ಹರ್ಷ ಸಾಂಘವಿ ಮತ್ತು ಅಹಮದಾಬಾದ್ ಪೊಲೀಸ್ ಆಯುಕ್ತರೊಂದಿಗೆ ಮಾತನಾಡಿರುವುದಾಗಿ ತಿಳಿಸಿದ್ದಾರೆ. ವಿಮಾನ ಅಪಘಾತದ ಬಗ್ಗೆ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ವೈಷ್ಣವ್ ಅವರು ಈ ದುರಂತ ವಿಮಾನ ಅಪಘಾತದಿಂದ ತೀವ್ರ ದುಃಖಿತರಾಗಿರುವುದಾಗಿ ಹೇಳಿದ್ದಾರೆ. ಅಹಮದಾಬಾದ್‌ನಲ್ಲಿ ಸಂಭವಿಸಿದ ದುರಂತ ವಿಮಾನ ಅಪಘಾತದ ಬಗ್ಗೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ದುಃಖ ವ್ಯಕ್ತಪಡಿಸಿದ್ದಾರೆ. ಅವರು ಗುಜರಾತ್ ಆರೋಗ್ಯ ಸಚಿವ ರುಷಿಕೇಶ್ ಪಟೇಲ್ ಅವರೊಂದಿಗೆ ಮಾತನಾಡಿ ಆರೋಗ್ಯ ಸೌಲಭ್ಯಗಳು ಮತ್ತು ಪರಿಹಾರ ಕಾರ್ಯಗಳ ಬಗ್ಗೆ ಮಾಹಿತಿ ಪಡೆದರು. ಅಹಮದಾಬಾದ್‌ನಲ್ಲಿ ನಡೆದ ವಿಮಾನ ಅಪಘಾತದ ಬಗ್ಗೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಆಘಾತ ವ್ಯಕ್ತಪಡಿಸಿದ್ದಾರೆ. ಪ್ರಯಾಣಿಕರು ಮತ್ತು ಅವರ ಕುಟುಂಬಗಳೊಂದಿಗೆ ತಮ್ಮ ಪ್ರಾರ್ಥನೆ ಇದೆ ಎಂದು ಡಾ. ಜೈಶಂಕರ್ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

<><*<><>*><>